## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) ರವರು ನಿಯಮ 72ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.**

### ಸೂಚನೆ

ಕಲಬುರಗಿ ಸ್ಥಳೀಯ ಯೋಜನಾ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ ಅಡಿಯಲ್ಲಿ ಹೆಚ್ಚುವರಿಯಾಗಿ 11 ಗ್ರಾಮಗಳನ್ನು ದಿನಾಂಕ:15.02.2016ರಲ್ಲಿ ಸೇರಿಸಿ ವಿಸ್ತರಿಸಿ ಆದೇಶಿಸಲಾಗಿತ್ತು. ಈ ವಿಸ್ತರಿತ ಸ್ಥಳೀಯ ಯೋಜನಾ ಪ್ರದೇಶಕ್ಕೆ ಮಹಾಯೋಜನೆ ಸಿದ್ಧಪಡಿಸಲು ಅನುಮೋದನೆ ನೀಡುವಂತೆ ಆದೇಶಿಸಿ ಎಂಟು ವರ್ಷಗಳೇ ಕಳೆದು ಹೋಗಿವೆ. ಆದರೆ ಇಲ್ಲಿಯವರೆಗೂ ಮಹಾಯೋಜನೆ ಸಿದ್ಧಪಡಿಸದೇ ಹಾಗೂ ಈ 11 ಗ್ರಾಮಗಳ ಅಭಿವೃದ್ಧಿ ಕಾರ್ಯಕ್ಕೂ ಅನುಮತಿ ನೀಡಿರುವುದಿಲ್ಲ. ಇದರಿಂದಾಗಿ ಈ ಗ್ರಾಮಗಳ ಅಭಿವೃದ್ಧಿ ಕಾರ್ಯ ಸ್ಥಗಿತಗೊಂಡಿರುವುದರಿಂದ ಸರ್ಕಾರಕ್ಕೆ ಬರಬೇಕಾಗಿದ್ದ ಪ್ರತಿ ಎಕರೆ ಜಮೀನಿನಿಂದ ಅಂದಾಜು 20 ರಿಂದ 22 ಲಕ್ಷ ರೂಪಾಯಿಯಂತೆ ಸುಮಾರು 1000 ಎಕರೆಗೂ ಹೆಚ್ಚಿನ ಪ್ರದೇಶದ ಅಭಿವೃದ್ಧಿಯಿಂದ ಅಂದಾಜು 2000 ಕೋಟಿಗೂ ಅಧಿಕ ಮೊತ್ತದ ಆದಾಯ ಬರದೆ ಬಹುದೊಡ್ಡ ನಷ್ಟವಾಗುತ್ತಿದೆ. ಹಾಗೆಯೇ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳದೇ ಇರುವುದರಿಂದ ಅಲ್ಲಿನ ಸಾರ್ವಜನಿಕರೂ ಕೂಡಾ ಅಭಿವೃದ್ಧಿ ಕಾರ್ಯಗಳಿಂದ ವಂಚಿತರಾಗಿ ತೊಂದರೆ ಅನುಭವಿಸುತ್ತಿದ್ದಾರೆ. ಇದರಿಂದಾಗಿ ಸರ್ಕಾರಕ್ಕೂ ಬಹುದೊಡ್ಡ ನಷ್ಟವಾಗುತ್ತಿದೆ. ಈ ಬಗ್ಗೆ ಕಳೆದ 14 ವರ್ಷಗಳಿಂದಲೂ ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿಯೇ ಕಾರ್ಯನಿರ್ವಹಿಸುತ್ತಿರುವ TPM ಅಧಿಕಾರಿಯೂ ಕೂಡಾ ಯಾವುದೇ ಕ್ರಮ ಕೈಗೊಳ್ಳದೇ ಬೇಜವಾಬ್ದಾರಿಯುತವಾಗಿ ನಡೆದುಕೊಳ್ಳುತ್ತಿದ್ದು, ಯಾವುದೇ ಕೋರಿಕೆಗೂ ಸ್ಪಂದಿಸುತ್ತಿಲ್ಲ. ಆದ್ದರಿಂದ ಕಲಬುರಗಿ ಸ್ಥಳೀಯ ಯೋಜನಾ ಪ್ರದೇಶಕ್ಕೆ ಹೆಚ್ಚುವರಿಯಾಗಿ ಸೇರಿಸಿರುವ 11 ಗ್ರಾಮಗಳನ್ನು ಅಭಿವೃದ್ಧಿ ಪಡಿಸಲು ಶೀಘ್ರವೇ ಕ್ರಮಕೈಗೊಂಡು ಆ ಭಾಗದ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಸೂಕ್ತ ಕ್ರಮ ಜರುಗಿಸುವ ಬಗ್ಗೆ.

### ಉತ್ತರ

ಕಲಬುರಗಿ ಸ್ಥಳೀಯ ಯೋಜನಾ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ ಅಡಿಯಲ್ಲಿ ಹೆಚ್ಚುವರಿಯಾಗಿ 11 ಗ್ರಾಮಗಳನ್ನು ದಿನಾಂಕ15-02-2016 ರಲ್ಲಿ ಸೇರಿಸಿ ವಿಸ್ತರಿಸಿ ಆದೇಶಿಸಲಾಗಿದ್ದು, ಸದರಿ ವಿಸ್ತರಿತ ಸ್ಥಳೀಯ ಯೋಜನಾ ಪ್ರದೇಶಕ್ಕೆ ಮಹಾಯೋಜನೆ (ಪ-III) ಯನ್ನು ತಯಾರಿಸಲು ಪ್ರಕ್ರಿಯೆಯನ್ನು ಪ್ರಾರಂಭಿಸಿ ದತ್ತಾಂಶ ಸಂಗ್ರಹಿಸಲು ಎಲ್ಲಾ ಸರ್ಕಾರಿ ಇಲಾಖೆಗಳ, ಖಾಸಗಿ ಸಂಸ್ಥೆಗಳಿಂದ ದತ್ತಾಂಶ ಸಂಗ್ರಹಿಸಲು ಕ್ರಮ ಜರುಗಿಸಲಾಗಿರುತ್ತದೆ. ಇದೇ ಹಂತದಲ್ಲಿ ದಿನಾಂಕ:18-07-2018 ರಂತೆ ಅಮೃತ್ ಯೋಜನೆಯಡಿಯಲ್ಲಿ ನಗರ/ಪಟ್ಟಣಗಳಿಗೆ Formulation of GIS Master Plan ಯಡಿಯಲ್ಲಿ ಮಹಾಯೋಜನೆ ತಯಾರಿಸುವ ಸಂಬಂಧ ಕೇಂದ್ರ ಸರ್ಕಾರದ ಅನುದಾನದಿಂದ ಅನುಷ್ಠಾನಗೊಳಿಸಲು ನಿರ್ಣಯಿಸಿ ಹಾಗೂ ಮಹಾನಗರದ ಮೂಲ ನಕ್ಷೆಯನ್ನು KSRSAC ರವರಿಂದ AMRUT Design & Standard (GIS ತಂತ್ರಾಂಶದಲ್ಲಿ) ಅನುಸಾರ ತಯಾರಿಸಿ ನೀಡಲು ದಿನಾಂಕ:21-01-2020 ರಂತೆ ಮೆ: DDF Consultants, Delhi ಇವರಿಗೆ ಮಹಾಯೋಜನೆ ಕೆಲಸವನ್ನು ವಹಿಸಲಾಗಿರುತ್ತದೆ.

ಈ ಮಧ್ಯೆ ಕೋವಿಡ್-19 ಸಾಂಕ್ರಾಮಿಕ ರೋಗದ ನಿಮಿತ್ಯ ಹಾಗೂ ಸಿಬ್ಬಂದಿ ಕೊರತೆಯಿಂದ ಮಹಾಯೋಜನೆ ತಯಾರಿಸುವ ಕಾರ್ಯ ಪ್ರಗತಿಯಲ್ಲಿ ಕುಂಠಿತಗೊಂಡಿರುತ್ತದೆ ಹಾಗೂ ದಿನಾಂಕ:13- 1-2022 ರಲ್ಲಿ ಮೆ: DDF Consultants, Delhi ಇವರು ಮಹಾಯೋಜನೆ ಕೆಲಸದಿಂದ ಹಿಂದೆ ಸರಿಯುತ್ತಿರುವುದಾಗಿ ತಿಳಿಸಿದ್ದು, ಈ ಕುರಿತು ದಿನಾಂಕ:05-07-2022 ರಂದು ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮೆ: DDF Consultants, Delhi ಇವರಿಗೆ ಮಹಾಯೋಜನೆ ಕೆಲಸವನ್ನು ಪುನಃ ಪ್ರಾರಂಭಿಸಲು ಸೂಚಿಸಿದ್ದು, ಅದರಂತೆ ಮಹಾಯೋಜನೆ ಕೆಲಸವನ್ನು ಪುನಃ ಪ್ರಾರಂಭಿಸಿರುತ್ತಾರೆ. ಆದರೆ, ಕರಾರು ಒಪ್ಪಂದದಂತೆ ಮೆ: DDF Consultants, Delhi ಇವರು ಮಹಾಯೋಜನೆ ಸಿದ್ಧಪಡಿಸಲು ಅಗತ್ಯ ಸಿಬ್ಬಂದಿಗಳನ್ನು ನಿಯೋಜಿಸದೇ ಇರುವುದರಿಂದ ಮಹಾಯೋಜನೆ ಕಾರ್ಯ ಪೂರ್ಣಗೊಳಿಸಲು ವಿಳಂಬವಾಗಿರುತ್ತದೆ.

ಪ್ರಸ್ತುತ ಮಹಾಯೋಜನೆ ಮೂಲ ನಕ್ಷೆಯನ್ನು ತಯಾರಿಸುವ ಕಾರ್ಯವು ಪೂರ್ಣಗೊಂಡಿದ್ದು, ಹಾಲಿ ಭೂ ಉಪಯೋಗ ನಕ್ಷೆಯನ್ನು ಸಿದ್ಧಪಡಿಸಲಾಗಿರುತ್ತದೆ. ಮಹಾಯೋಜನೆಗೆ ಸಂಬಂಧಿಸಿದ ಅಧ್ಯಯನ ನಕ್ಷೆಗಳು ಹಾಗೂ concept plan ನ್ನು ತಯಾರಿಸಲಾಗಿದೆ. ಮಹಾಯೋಜನೆ (ಪ-iii) ರ ಕಾರ್ಯವು ಪ್ರಗತಿಯಲ್ಲಿದ್ದು, September 2024 ರ ಅಂತ್ಯದೊಳಗಾಗಿ ತಾತ್ಕಾಲಿಕ ಮಹಾಯೋಜನೆ ಕಾರ್ಯವನ್ನು ಪೂರ್ಣಗೊಳಿಸಲಾಗುವುದು.

**(ಬಿ.ಎಸ್ ಸುರೇಶ)**
ನಗರಾಭಿವೃದ್ಧಿ ಮತ್ತು ನಗರ ಯೋಜನೆ
ಸಚಿವರು

ಸಂಖ್ಯೆ: ನಅಇ 41 ಎಲ್‌ಸಿಕ್ಯೂ 2024